APRIL 15, 2026

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಕೇಂದ್ರ ಸರ್ಕಾರ ಕೊಡಮಾಡುವ** ರಾಷ್ಟ್ರೀಯ ಪಂಚಾಯತ್ ಪುರಸ್ಕಾರಕ್ಕೆ, ರಾಜ್ಯದ 6 ಗ್ರಾಮ ಪಂಚಾಯತಿಗಳು ಪ್ರಶಸ್ತಿ ಪಡೆದಿರುವುದು ರಾಜ್ಯದ ಪಂಚಾಯತ್ ರಾಜ್ ವ್ಯವಸ್ಥೆಯ ಉತ್ಕೃಷ್ಟತೆಗೆ ಸಾಕ್ಷಿಯಾಗಿವೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ತಮ್ಮ ಎಕ್ಸ್ ಖಾತೆ ಮೂಲಕ ಮಾಹಿತಿ ಹಂಚಿಕೊಂಡಿರುವ ಸಚಿವರು, 2025 ರ ದೀನ್ ದಯಾಳ್ ಉಪಾಧ್ಯಾಯ ಸತತ್ ವಿಕಾಸ್ ಪುರಸ್ಕಾರಕ್ಕೆ, ಉಡುಪಿ ಜಿಲ್ಲೆ ಹೆಬ್ರಿ ತಾಲೂಕಿನ, ಮುದ್ರಾಡಿ ಗ್ರಾಮ ಪಂಚಾಯತ್, ಕುಂದಾಪುರ ತಾಲೂಕಿನ ವಂಡ್ಸೆ ಗ್ರಾಮ ಪಂಚಾಯತ್, ಮಡಾಮಕ್ಕಿ, ಸಣೂರು ಹಾಗೂ ಹಕ್ಲಾಡಿ ಗ್ರಾಮ ಪಂಚಾಯಿತಿಗಳು ಸೇರಿದಂತೆ, ಬೆಂಗಳೂರು ಪೂರ್ವದ, ಹಾಲನಾಯಕನ ಹಳ್ಳಿ ಗ್ರಾಮ ಪಂಚಾಯತ್ ಆಯ್ಕೆಯಾಗಿವೆ. ಆರೋಗ್ಯಕರ ಪಂಚಾಯತ್ ವಿಭಾಗ, ಬಡತನ ಮುಕ್ತ ಮತ್ತು ಸುಧಾರಿತ ಸೇರಿದಂತೆ ಹಲವು ವಿಭಾಗಗಳಲ್ಲಿ ರಾಜ್ಯದ ಗ್ರಾಮ ಪಂಚಾಯಿತಿಗಳು ರಾಷ್ಟ್ರ ಮಟ್ಟದಲ್ಲಿ ಗಮನ ಸೆಳೆದಿವೆ ಎಂದು ಸಚಿವರು ತಿಳಿಸಿದ್ದಾರೆ.

<><><>

**ಪ್ರಧಾನಮಂತ್ರಿ ನರೇಂದ್ರ ಮೋದಿ** ಅವರು ರಾಜ್ಯ ಪ್ರವಾಸ ಕೈಗೊಂಡಿದ್ದು, ಮಂಡ್ಯ ಜಿಲ್ಲೆ ನಾಗಮಂಗಲ ತಾಲೂಕಿನ, ಐತಿಹಾಸಿಕ ಆದಿಚುಂಚನಗಿರಿ ಕ್ಷೇತ್ರಕ್ಕೆ ತಲುಪಿದ್ದಾರೆ. ಇನ್ನು ಕೆಲವೇ ಕ್ಷಣಗಳಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಶ್ರೀ ಗುರು ಭೈರವೈಕ್ಯ ಮಂದಿರವನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಇದೇ ಸಂದರ್ಭ ಭೈರವೈಕ್ಯ ಶ್ರೀ ಬಾಲಗಂಗಾಧರನಾಥ ಶ್ರೀಗಳ ಗುದ್ದುಗೆಯನ್ನು ಉದ್ಘಾಟಿಸಲಿದ್ದಾರೆ. ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ, ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆಗಳ ಖಾತೆ ಸಚಿವ ಹೆಚ್.ಡಿ ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯ ಸ್ವಾಮಿ, ವಿಧಾನಸಭೆ ವಿರೋಧ ಪಕ್ಷ ನಾಯಕ ಆರ್.ಅಶೋಕ ಸೇರಿದಂತೆ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬೆಂಗಳೂರಿನ ಎಚ್.ಎ.ಎಲ್ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ವಾಗತಿಸಿ, ಬರಮಾಡಿಕೊಂಡರು.

<><><>

**ಎರಡು ಸಾವಿರ ವರ್ಷಗಳ ಸುದೀರ್ಘ** ಇತಿಹಾಸವಿರುವ ಶ್ರೀ ಆದಿ ಚುಂಚನಗಿರಿ ಮಠವನ್ನು ಪವಿತ್ರ ಧರ್ಮ ಕ್ಷೇತ್ರವನ್ನಾಗಿಸಿ, ಶಿಕ್ಷಣ, ದಾಸೋಹ, ಆರೋಗ್ಯ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ, ಪದ್ಮವಿಭೂಷಣ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿಯವರು ರಾಜ್ಯಕ್ಕೆ ಹಾಗೂ ದೇಶಕ್ಕೆ ಅಪಾರ ಕೊಡುಗೆಗಳನ್ನು ನೀಡಿದ್ದಾರೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ತಮ್ಮ ಎಕ್ಸ್ ಖಾತೆ ಮೂಲಕ ಬಣ್ಣಿಸಿದ್ದಾರೆ. ಶ್ರೀ ಗುರು ಭೈರವೈಕ್ಯ ಮಂದಿರ ಉದ್ಘಾಟನೆಗೆ ಆಗಮಿಸಿರುವ ಪ್ರಧಾನಮಂತ್ರಿಯವರನ್ನು ಸಚಿವರು ಆತ್ಮೀಯವಾಗಿ ಸ್ವಾಗತಿಸಿದ್ದಾರೆ.

<><><>

**ಕೇಂದ್ರ ಸರ್ಕಾರ ಜಾರಿಗೆ ತಂದಿರುವ,** ಹಲವು ಯೋಜನೆಗಳು ಮಹಿಳೆಯರ ಜೀವನಮಟ್ಟ ಸುಧಾರಣೆಗೆ ಸಹಕಾರಿಯಾಗಿವೆ. ನಾರಿ ಶಕ್ತಿ ವಂದನ ಅಧಿನಿಯಮದ ಮೂಲಕ, ಮಹಿಳೆಯರಿಗೆ, ಶೇಕಡ 33 ರಷ್ಟು ಮೀಸಲಾತಿ ಕಲ್ಪಿಸುವುದರಿಂದ, ರಾಜಕೀಯ ಕ್ಷೇತ್ರದಲ್ಲಿ ಮಹಿಳಾ ಪ್ರಾತಿನಿಧ್ಯ ಹೆಚ್ಚಿಸಿ, ಅವರ ಪಾಲ್ಗೊಳ್ಳುವಿಕೆಯನ್ನು ಖಾತ್ರಿಪಡಿಸುವ ಮಹತ್ವದ ಹೆಜ್ಜೆಯಾಗಿದೆ ಎಂದು ಬಾಗಲಕೋಟೆ ನಗರಸಭೆ ಮಾಜಿ ಉಪಾಧ್ಯಕ್ಷರಾದ ಶೋಭಾ ರಾವ್, ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

**ನಾರಿ ಶಕ್ತಿ ವಂದನ ಅಧಿನಿಯಮ** ಭಾರತದ ಸುವರ್ಣಯುಗದ ಹೆಗ್ಗುರುತು ಎಂದು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಖಾತೆ ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಈ ಕಾನೂನಿನ ಮೂಲಕ ದೇಶದ ಉನ್ನತ ಶಾಸನ ಸಂಸ್ಥೆಗಳಲ್ಲಿ ಮಹಿಳಾ ಪ್ರಾತಿನಿಧ್ಯ ಹೆಚ್ಚಲಿದ್ದು, ಸುದೃಢ ರಾಷ್ಟ್ರ ನಿರ್ಮಾಣಕ್ಕೆ ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

<><><>

**ಇಂದು ಸೌರಮಾನ ಯುಗಾದಿ–** ವಿಶು ಹಬ್ಬದ ಸಂಭ್ರಮ. ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು, ನಾಡಿನ ಜನತೆಗೆ ವಿಶು ಹಬ್ಬದ ಶುಭಾಶಯಗಳನ್ನು ಕೋರಿದ್ದಾರೆ.

<><><>

**ದಕ್ಷಿಣ ಕನ್ನಡ ಜಿಲ್ಲೆ,** ಬಂಟ್ವಾಳ ರೇಲ್ವೆ ನಿಲ್ದಾಣಕ್ಕೆ ಆಧುನಿಕ ರೂಪ ನೀಡಲಾಗುತ್ತಿದೆ. ಭಾರತೀಯ ರೈಲ್ವೆ ಸುಸಜ್ಜಿತ ಸೌಲಭ್ಯಗಳ ಮೂಲಕ ಪ್ರಯಾಣಿಕರ ಅನುಭವವನ್ನು ಉತ್ತಮಗೊಳಿಸಲು ಮತ್ತು ಸುಲಭ ಸಂಚಾರಕ್ಕೆ ಹೆಚ್ಚಿನ ಒತ್ತು ನೀಡುತ್ತಿದೆ.

<><><>

**ಪೋಷಕರು ಮಕ್ಕಳನ್ನು ಕಲೆ,** ಸಂಸ್ಕೃತಿ, ಸಾಹಿತ್ಯದ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವಂತೆ ಪ್ರೋತ್ಸಾಹಿಸಬೇಕು. ಆ ಮೂಲಕ ಜಾತ್ಯಾತೀತ ಮನೋಭಾವ ಹಾಗೂ ಮಾನವೀಯ ಮೌಲ್ಯಗಳನ್ನು ಬಿತ್ತಬೇಕು ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ ಪ್ರಭಾಕರ ಕರೆ ನೀಡಿದ್ದಾರೆ.  ಕೋಲಾರದಲ್ಲಿ ಆಯೋಜಿಸಿದ್ದ, ಆದಿಮ ಮಕ್ಕಳ ಮೇಳದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>